# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಯೋಜನಾ ಮಂಡಳಿಯನ್ನು ಪುನರ್‌ರಚಿಸುವ ಆದೇಶ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಪಿಡಿ 48 ಎಸ್‌ಪಿಬಿ 2010, ದಿ: 22.9.2010.
2) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 121 ಶಿಸನೇ 2010, ದಿ: 4.11.2010.
3) ದಿನಾಂಕ: 10.3.2011ರ ಸರ್ಕಾರದ ಆದೇಶ ಸಂಖ್ಯೆ: ಪಿಡಿ 82 ಎಸ್‌ಪಿಬಿ 2010.

- - -

**ಪ್ರಸ್ತಾವನೆ:**

ಶ್ರೀ ರಾಮಚಂದ್ರ ಗೌಡ, ವಿಧಾನ ಪರಿಷತ್ ಸದಸ್ಯರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಕಾತಿ ಮಾಡಿ ಉಲ್ಲೇಖ (1)ರ ದಿನಾಂಕ: 22.9.2010 ರ ಸರ್ಕಾರದ ಆದೇಶದಲ್ಲಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಉಲ್ಲೇಖ (2)ರ ದಿನಾಂಕ: 4.11.2010 ರ ಸರ್ಕಾರದ ಅಧಿಸೂಚನೆಯಲ್ಲಿ ಶ್ರೀ ರಾಮಚಂದ್ರ ಗೌಡ, ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ, ಇವರಿಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನವನ್ನು ನೀಡಲಾಗಿರುತ್ತದೆ.

ಉಲ್ಲೇಖ (3)ರ ದಿನಾಂಕ: 10.3.2011ರ ಸರ್ಕಾರದ ಆದೇಶದಲ್ಲಿ ರಾಜ್ಯ ಯೋಜನಾ ಮಂಡಳಿಯನ್ನು ಅಧಿಕಾರಿ ಹಾಗೂ ಅಧಿಕಾರೇತರ ಸದಸ್ಯರನ್ನೊಳಗೊಂಡಂತೆ ಪುನರ್ ರಚಿಸಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದಂತೆ ಈಗಾಗಲೇ ಪುನರ್ ರಚಿತವಾಗಿರುವ ರಾಜ್ಯ ಯೋಜನಾ ಮಂಡಳಿಯಲ್ಲಿ ಹಾಲಿ ಇರುವ ಏಳು ಜನ ಅಧಿಕಾರೇತರ ಸದಸ್ಯರೊಂದಿಗೆ ಮತ್ತೆ ಐದು ಜನ ಅಧಿಕಾರೇತರ ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಮಾನ್ಯ ಮುಖ್ಯ ಮಂತ್ರಿಯವರು ಆದೇಶಿಸಿರುತ್ತಾರೆ.

ಅದರಂತೆ ಈ ಆದೇಶ

**ಸರ್ಕಾರದ ಆದೇಶದ ಸಂಖ್ಯೆ: ಪಿಡಿ 82 ಎಸ್‌ಪಿಬಿ 2010, ಬೆಂಗಳೂರು, ದಿನಾಂಕ: 8 ನೇ ಸೆಪ್ಟೆಂಬರ್ 2011.**

ದಿನಾಂಕ: 10.3.2011ರ ಸರ್ಕಾರದ ಆದೇಶ ಸಂಖ್ಯೆ: ಪಿಡಿ 82 ಎಸ್‌ಪಿಬಿ 2010ನ್ನು ಮುಂದುವರೆಸುತ್ತಾ, ಪುನರ್ ರಚಿತ ರಾಜ್ಯ ಯೋಜನಾ ಮಂಡಳಿಯಲ್ಲಿರುವ 7 ಜನ ಅಧಿಕಾರೇತರ ಸದಸ್ಯರೊಂದಿಗೆ ಕೆಳಕಂಡ ಐದು ಜನ ಅಧಿಕಾರೇತರ ಸದಸ್ಯರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ರಾಜ್ಯ ಯೋಜನಾ ಮಂಡಳಿಯ ಅಧಿಕಾರೇತರ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಲಾಗಿದೆ.

1. ಶ್ರೀ ಸಿ.ಆರ್. ನಜೀರ್ ಅಹಮದ್,
   ನಂ. 193, ನ್ಯೂ ಮಸೀದಿ ರಸ್ತೆ,
   ಬಸವರಾಜಪೇಟೆ,
   ದಾವಣಗೆರೆ.

82

2. ಶ್ರೀ ರವಿ ಕುಮಾರ್ ಕೆ. ಪಟೇಲ್,
ಫ್ಲಾಟ್ ನಂ. 111, ಒಂದನೇ ಮಹಡಿ,
ಗ್ರೀನ್ ಕಾಂಪ್ಲೆಕ್ಸ್,
ಬಿ.ಟಿ.ಸಿ ಕ್ಲಬ್ ಎದುರು,
ರೇಸ್‌ಕೋರ್ಸ್ ರಸ್ತೆ,
ಬೆಂಗಳೂರು – 560 001.

3. ಶ್ರೀ ಬಿ.ಆರ್. ಜಯಂತ್ ಬಿನ್ ರಾಂಭಟ್. ಬಿ.ಪಿ,
ಬೆದೂರು ಗ್ರಾಮ,
ಕಲ್ಮನೆ ಪೋಸ್ಟ್,
ಸಾಗರ ತಾಲ್ಲೂಕು,
ಶಿವಮೊಗ್ಗ ಜಿಲ್ಲೆ.

4. ಶ್ರೀ ಜೆ.ಆರ್. ಬಂಗೇರ,
ಅಧ್ಯಕ್ಷರು,
ಎಫ್.ಕೆ.ಸಿ.ಸಿ.ಐ,
ಬೆಂಗಳೂರು.

5. ಶ್ರೀ ಎಂ. ಭಾರದ್ವಾಜ್,
ಕೈಗಾರಿಕೋದ್ಯಮಿ,
ಮೆ: ಮ್ಯೆಲರ್ ಸೈಕಲ್ಸ್ ಮತ್ತು ಮೋಟಾರ್ ಕಂಪನಿ,
ಮಾಡರ್ನ್ ಟಾಕೀಸ್ ಸಂಕೀರ್ಣ,
ಬಿ.ಹೆಚ್. ರಸ್ತೆ,
ಶಿವಮೊಗ್ಗ – 577 201.

2. ಉಲ್ಲೇಖ (3)ರ ದಿನಾಂಕ: 10.3.2011ರ ಸರ್ಕಾರದ ಆದೇಶದಲ್ಲಿ ಸೂಚಿಸಲಾಗಿರುವಂತೆ ರಾಜ್ಯ ಯೋಜನಾ ಮಂಡಳಿಯ ಕಾರ್ಯಗಳು ಮುಂದುವರೆಯುತ್ತವೆ. ಅವುಗಳು ಕೆಳಕಂಡಂತಿವೆ.

1) ಪಂಚವಾರ್ಷಿಕ ಯೋಜನೆ ಮತ್ತು ವಾರ್ಷಿಕ ಯೋಜನೆಗಳನ್ನು ರೂಪಿಸುವುದು ಹಾಗೂ ಕಾರ್ಯಗತಗೊಳಿಸುವ ಬಗ್ಗೆ ಸಲಹೆ ನೀಡುವುದು.

2) ಸ್ವಾಭಾವಿಕ ಮತ್ತು ಮಾನವ ಸಂಪನ್ಮೂಲಗಳ ಗರಿಷ್ಠ ಬಳಕೆಗಾಗಿ ನೀತಿಗಳನ್ನು ಸಲಹೆ ನೀಡುವುದು.

3) ರಾಜ್ಯದಲ್ಲಿ ಪ್ರಾಂತೀಯ ಅಸಮತೋಲನವನ್ನು ಕಡಿಮೆಗೊಳಿಸಲು ಸೂಕ್ತವಾದ ನೀತಿ ಹಾಗೂ ಕಾರ್ಯಕ್ರಮಗಳನ್ನು ರೂಪಿಸಲು ಸಲಹೆ ನೀಡುವುದು.

4) ಆರ್ಥಿಕ ಸುಧಾರಣೆ ಕಾರ್ಯಕ್ರಮಗಳಿಗನುಸಾರವಾಗಿ ರಾಜ್ಯದ ಆರ್ಥಿಕ ವ್ಯವಸ್ಥೆಯಲ್ಲಿ ಬಂಡವಾಳ ಹೂಡಿಕೆಯನ್ನು ಸುಧಾರಿಸಲು ಸಲಹೆಗಳನ್ನು ನೀಡುವುದು.

.....3

5) ಯೋಜನೆಯಡಿ ಬಂಡವಾಳ ಹೂಡಿಕೆ ಮಟ್ಟಗಳ ಬಗ್ಗೆ ಮತ್ತು ಅದಕ್ಕಾಗಿ ಸಂಪನ್ಮೂಲ ಸಂಗ್ರಹಣೆಗೆ ಅಗತ್ಯವಾದ ಸಲಹೆ ನೀಡುವುದು.

6) ರಾಷ್ಟ್ರೀಯ ಯೋಜನೆಯ ಚೌಕಟ್ಟಿನೊಳಗೆ ರಾಜ್ಯ ಯೋಜನೆಗೆ ಸೂಕ್ತವಾದ ಆದ್ಯತೆ ಹಾಗೂ ತಂತ್ರಗಳನ್ನು ರೂಪಿಸಲು ಸಲಹೆ ನೀಡುವುದು.

7) ಯೋಜನಾ ಕಾರ್ಯಕ್ರಮಗಳು / ಯೋಜನೆಗಳ ಅನುಷ್ಠಾನ ಮತ್ತು ಇವುಗಳನ್ನು ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸಲು ಅಗತ್ಯವಾದ ಸೂಕ್ತ ಸಲಹೆ ನೀಡುವುದು.

8) ವಿಕೇಂದ್ರೀಕೃತ ಯೋಜನೆಯನ್ನು ಅಭಿವೃದ್ಧಿಪಡಿಸಲು ಕ್ರಮಗಳನ್ನು ಸೂಚಿಸುವುದು ಹಾಗೂ ವಿಶೇಷವಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯಗತಗೊಳಿಸುವಿಕೆ ಹಾಗೂ ಈ ಯೋಜನೆಗಳನ್ನು ರಾಜ್ಯ ವಲಯ ಯೋಜನೆಗಳಲ್ಲಿ ವಿಲೀನಗೊಳಿಸಲು ಅಗತ್ಯವಾದ ಕ್ರಮಗಳ ಸಲಹೆ ನೀಡುವುದು.

9) ಸರ್ಕಾರವು ಕಾಲಕಾಲಕ್ಕೆ ಅದಕ್ಕೆ ವಹಿಸುವ ವಿಷಯಗಳ ಬಗ್ಗೆ ಶಿಫಾರಸ್ಸು ಮಾಡುವುದು.

10) ರಾಜ್ಯ ಯೋಜನಾ ಮಂಡಳಿಯ ಕೆಲಸಗಳಿಗೆ ಅಗತ್ಯವಾದ ಸಂಶೋಧನಾ ಅಧ್ಯಯನ ಮತ್ತು ವಿಚಾರ ಸಂಕಿರಣಗಳನ್ನು ಸರ್ಕಾರದ ಹೊರಗಿನ ವಿಶ್ವವಿದ್ಯಾನಿಲಯಗಳು ಅಥವಾ ಇತರೆ ಸಂಶೋಧನಾ ಸಂಸ್ಥೆಗಳಿಂದ ಪ್ರಾಯೋಜಿಸುವುದು.

3. ರಾಜ್ಯ ಯೋಜನಾ ಮಂಡಳಿಯ ಅಧ್ಯಕ್ಷರಾದ ಮಾನ್ಯ ಮುಖ್ಯಮಂತ್ರಿಗಳ ಅಧಿಕಾರ ಹಾಗೂ ಮುಂದಾಳತ್ವದಲ್ಲಿ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರು ಮಂಡಳಿಯ ಕೆಲಸ ಕಾರ್ಯಗಳು, ದಕ್ಷತೆ ಮತ್ತು ಸುಗಮವಾಗಿ ನೆರವೇರಲು ಅಗತ್ಯವಾದ ಅಧಿಕಾರವನ್ನು ಚಲಾಯಿಸುವುದು.

4. (ಅ) ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ಅನುಬಂಧ – (ಎ)ರ ಪಟ್ಟಿಯ ಪ್ರಕಾರ ಮಂಡಳಿಯ ಅಧಿಕಾರೇತರ ಸದಸ್ಯರಿಗೆ ಪ್ರಯಾಣ ಭತ್ಯೆಯನ್ನು ನೀಡಲು ಮಂಜೂರಾತಿಯನ್ನು ನೀಡಲಾಗಿದೆ.

(ಆ) ದಿನಭತ್ಯೆ ಅನ್ವಯಿಸುವ ಕಡೆಯಲ್ಲಿ ಅದರ ಬದಲು ಮಂಡಳಿಯ ಸಭೆಗಳಿಗೆ ಹಾಜರಾಗುವ ಅಧಿಕಾರೇತರ ಸದಸ್ಯರಿಗೆ ದಿನವೊಂದಕ್ಕೆ ರೂ.೫೦೦/- ಸಭಾ ಭತ್ಯೆಯನ್ನು ಮಂಜೂರು ಮಾಡಲಾಗಿದೆ.

5. ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಗಳು ರಾಜ್ಯ ಯೋಜನಾ ಮಂಡಳಿಯ ಕಾರ್ಯಗಳ ಅಧಿಕಾರ ಹೊಂದಿರುತ್ತಾರೆ ಮತ್ತು ರಾಜ್ಯ ಯೋಜನಾ ಮಂಡಳಿಗೆ ಸಂಬಂಧಿಸಿದ ಲೆಕ್ಕಪತ್ರ ಶೀರ್ಷಿಕೆಯಡಿಯಿರುವ ನಿಧಿಯ ನಿರ್ವಹಣಾ ಅಧಿಕಾರ ಹೊಂದಿರುವರು.

........4

6. ಇದಕ್ಕೆ ತಗಲುವ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ "3451-00-101-4-00" ರಡಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಉಷಾಬಾಯಿ) 8/9/2011
ಸರ್ಕಾರದ ಅಧೀನ ಕಾರ್ಯದರ್ಶಿ- 3
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ರಾಜ್ಯ ಯೋಜನಾ ಮಂಡಳಿಗೆ ಕೂಡಲೇ ಒದಗಿಸುವಂತೆ ಕೋರಿ ಕಳುಹಿಸಲಾಗಿದೆ.

ಪ್ರತಿಗಳನ್ನು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸ ಸೌಧ, ಬೆಂಗಳೂರು.
4. ರಾಜ್ಯ ಯೋಜನಾ ಮಂಡಳಿಯ ಎಲ್ಲಾ ಸದಸ್ಯರು.
5. ಯೋಜನಾ ಸಚಿವರ ಆಪ್ತ ಕಾರ್ಯದರ್ಶಿಗಳು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಮತ್ತು ಪದನಿಮಿತ್ತ ಸದಸ್ಯ ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ ಇವರ ಆಪ್ತ ಕಾರ್ಯದರ್ಶಿಗಳು.
11. ಉಪ ಕಾರ್ಯದರ್ಶಿಗಳು (ಆಡಳಿತ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
12. ಪ್ರೆಸ್ ಟೇಬಲ್.
13. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.

Cm/G.O/G.O. on reconstitution of SPB 2011